ಸಂ. 4897
ದಿನಾಂಕ 04/12/18
ಬೆಂಗಳೂರು

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ರವರಿಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಊಲವಾಡಿ ಗ್ರಾಮದಲ್ಲಿ ಹಂಚಿಕೆಯಾಗಿರುವ 3 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಯೋಜನೆಯ ಹಂಚಿಕೆ ಆದೇಶವನ್ನು ರದ್ದುಗೊಳಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ : ಇಎನ್ 159 ಎನ್‌ಸಿಇ 2015, ದಿ; 11.09.2015.
2. ಸರ್ಕಾರದ ಆದೇಶ ಸಂಖ್ಯೆ: ಇಎನ್ 68 ಎನ್‌ಸಿಇ 2017, ದಿನಾಂಕ: 09.03.2017.
3. ಸರ್ಕಾರದ ಪತ್ರ ಸಂಖ್ಯೆ: ಇಎನ್ 379 ಎನ್‌ಸಿಇ 2017, ದಿನಾಂಕ: 30.05.2018.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ: ಕೆ.ಆರ್.ಇ.ಡಿ/07/ಎಸ್‌ಜಿ/ಎಫ್–245/2018/7200–01, ದಿನಾಂಕ: 30.10.2018.

MD KREDL

***

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಆದೇಶದ ಮೂಲಕ ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಊಲವಾಡಿ ಗ್ರಾಮದಲ್ಲಿ ಕೆಲವು ಷರತ್ತುಗಳಿಗೊಳಪಟ್ಟು 3 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ನಿರಾಕ್ಷೇಪಣೆಯನ್ನು ನೀಡಲಾಗಿತ್ತು.

ಸದರಿ ನಿರಾಕ್ಷೇಪಣಾ ಆದೇಶದಲ್ಲಿನ ಷರತ್ತುಗಳ ಪೈಕಿ ಕ್ರಮ ಸಂಖ್ಯೆ (2) ರ ಷರತ್ತಿನಂತೆ ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ರವರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸೌರ ನೀತಿ 2014–21 ರ ಪ್ರಕಾರ ಅನ್ವಯವಾಗುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಪಾವತಿಸಬೇಕಾಗಿತ್ತು. ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದ ಮೂಲಕ ಖಾಸಗಿ ಸ್ವತಂತ್ರ ವಿದ್ಯುತ್ ಉತ್ಪಾದಕರ ವಿಭಾಗದಡಿ ಸ್ವಂತ ಉಪಯೋಗಕ್ಕಾಗಿ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಪ್ರವರ್ಗದಡಿ ಹಂಚಿಕೆಯಾಗುವ ಆದೇಶಗಳಲ್ಲಿ ಯೋಜನಾ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸೌರ ನೀತಿ 2014–21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು ಹಂಚಿಕೆ ಆದೇಶದ ದಿನಾಂಕದಿಂದ 15 ದಿನಗಳೊಳಗೆ ಪಾವತಿಸಬೇಕೆಂದು ಹಾಗೂ 45 ದಿನಗಳೊಳಗೆ ಬ್ಯಾಂಕ್ ಖಾತರಿಯನ್ನು ಸಲ್ಲಿಸಬೇಕೆಂದು, ಇಲ್ಲವಾದಲ್ಲಿ ಅಂತಹ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದಾಗಿ ಷರತ್ತನ್ನು ಅಳವಡಿಸಲಾಗಿರುತ್ತದೆ.

ಆದರೆ, ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ರವರು ಸದರಿ ಷರತ್ತನ್ನು ಪಾಲಿಸದ ಕಾರಣ ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದ ಮೂಲಕ ಕಲ್ಪಿಸಿರುವ ಅವಕಾಶದನ್ವಯ ಸಂಸ್ಕರಣಾ ಶುಲ್ಕ ಮತ್ತು ನೆರವೇರಿಕೆ ಬ್ಯಾಂಕ್ ಖಾತರಿಯನ್ನು 15 ದಿನಗಳಲ್ಲಿ ಸಲ್ಲಿಸುವಂತೆ, ಇಲ್ಲದಿದ್ದಲ್ಲಿ ಸದರಿ ಸೌರ ವಿದ್ಯುತ್ ಹಂಚಿಕೆಯನ್ನು ರದ್ದುಮಾಡುವುದಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಜಾರಿಗೊಳಿಸಿದ್ದ ನೋಟೀಸಿಗೆ ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ರವರು ಯಾವುದೇ ಪ್ರತಿಕ್ರಿಯೆ ವ್ಯಕ್ತಪಡಿಸದಿರುವುದರಿಂದ ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಆದೇಶದ ಮೂಲಕ ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಊಲವಾಡಿ ಗ್ರಾಮದಲ್ಲಿ ಕೆಲವು ಷರತ್ತುಗಳಿಗೊಳಪಟ್ಟು ಹಂಚಿಕೆಯಾಗಿರುವ 3 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕ ಯೋಜನೆಯನ್ನು ರದ್ದುಪಡಿಸಿ ಆದೇಶವನ್ನು ಹೊರಡಿಸುವಂತೆ ಮೇಲೆ

...2)

GM (Tech) KREDL

ಒದಲಾದ ಕ್ರಮ ಸಂಖ್ಯೆ (4) ರ ಪತ್ರದ ಮೂಲಕ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇವಿನ್ 593 ಎನ್‌ಸಿಇ 2018,**
**ಬೆಂಗಳೂರು, ದಿನಾಂಕ: 01.12.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಊಲವಾಡಿ ಗ್ರಾಮದಲ್ಲಿ ಕೆಲವು ಷರತ್ತುಗಳಿಗೊಳಪಟ್ಟು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಹಂಚಿಕೆಯಾಗಿರುವ 3 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಯೋಜನೆಯನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ರದ್ದುಗೊಳಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
6. ಜಿಲ್ಲಾಧಿಕಾರಿಗಳು, ಚಿಂತಾಮಣಿ ಜಿಲ್ಲೆ, ಚಿಂತಾಮಣಿ.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ಚಿಂತಾಮಣಿ ಜಿಲ್ಲೆ, ಚಿಂತಾಮಣಿ.
8. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
9. M/s Pristine Solar Park Pvt. Ltd., NO. 332, 43rd Main 1st Cross, Ideal Homes, 2nd Phase, Rajarajeshwarinagar, Bengalureu-5600098..
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ಕಂಪನಿಯವರಿಗೆ 3 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರನ್ನು ಸ್ಥಾಪಿಸಲು ನಿರಾಕ್ಷೇಪಣೆ ನೀಡುವ ಕುರಿತು.

ಓದಲಾಗಿದೆ: ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ:KRED/07/GC/IPP_PristineSPPL/F-245/2014-15/2117, ದಿನಾಂಕ: 09.06.2015.

* * *

**ಪ್ರಸ್ತಾವನೆ :-**

ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ಕಂಪನಿಯವರು ಚಿಕ್ಕಬಳ್ಳಾಪುರ ಜಿಲ್ಲೆಯ, ಚಿಂತಾಮಣಿ ತಾಲ್ಲೂಕಿನ ಊಲವಾಡಿ ಗ್ರಾಮದಲ್ಲಿ 03 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರನ್ನು IPP Category for Third Party Sale ಅಡಿ ಸ್ಥಾಪಿಸಲು ಪಿ.ಎಫ್.ಆರ್.ಪಿ. ಯೊಂದಿಗೆ ಕಂಪನಿಯ MOA ಮತ್ತು AOA ಪ್ರತಿಗಳನ್ನು, ಉದ್ದೇಶಿತ ಯೋಜನೆಯ ಸ್ಥಳ ವಿವರಗಳನ್ನು ಮತ್ತು ಇತರ ವಿವರಗಳನ್ನೊಳಗೊಂಡಂತೆ ಚೆಕ್‌ಲಿಸ್ಟ್‌ನೊಂದಿಗೆ ಪ್ರಸ್ತಾವನೆ ಸಲ್ಲಿಸಿದ್ದು, ಉದ್ದೇಶಿತ 3 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರವನ್ನು ಸ್ಥಾಪಿಸಲು ಸರ್ಕಾರದ ಅನುಮೋದನೆ ನೀಡುವ ಕುರಿತು ಹಂಚಿಕೆ ಸಮಿತಿಯ ಮುಂದೆ ಮಂಡಿಸಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ರವರು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಸದ್ಯದಲ್ಲಿ ಹಂಚಿಕೆ ಸಮಿತಿ ಸಭೆ ಸೇರುವ ಸಂಭವ ಇಲ್ಲದೆ ಇರುವುದರಿಂದ, ಈ ಪ್ರಸ್ತಾವನೆಯನ್ನು ಮುಂದಿನ ಹಂಚಿಕೆ ಸಮಿತಿ ಸಭೆಯಲ್ಲಿ ಮಂಡಿಸಿ ಸ್ಥಿರೀಕರಿಸಿಕೊಳ್ಳಲು ತೀರ್ಮಾನಿಸಿ ಯೋಜನೆಗೆ ನಿರಾಕ್ಷೇಪಣೆ ನೀಡುವ ಬಗ್ಗೆ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 159 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ: 11.09.2015.**

ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ಕಂಪನಿಯವರಿಗೆ ಚಿಕ್ಕಬಳ್ಳಾಪುರ ಜಿಲ್ಲೆಯ, ಚಿಂತಾಮಣಿ ತಾಲ್ಲೂಕಿನ, ಊಲವಾಡಿ ಗ್ರಾಮದಲ್ಲಿ 03 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರನ್ನು IPP Category for Third Party Sale ಅಡಿ ಸ್ಥಾಪಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. ಮೆ: ಪ್ರಿಸ್ಟೀನ್ ಸೋಲಾರ್ ಪಾರ್ಕ್ ಪ್ರೈ.ಲಿ., ರವರು ಸೌರ ನೀತಿ 2014-21 ರನ್ವಯ ಈ ಬಾಬ್ತು ನಿಗದಿತ ಶುಲ್ಕ ಮತ್ತು ಬ್ಯಾಂಕ್ ಗ್ಯಾರಂಟಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.
3. ಯೋಜನೆಯಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು ಕೆ.ಇ.ಆರ್.ಸಿ.ಯ ನಿಯಮಗಳನ್ವಯ ಅಭಿವೃದ್ಧಿದಾರರು ಸ್ವಂತಕ್ಕೆ ಬಳಸಿಕೊಳ್ಳಲು ಅಥವಾ ಮೂರನೆಯ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ.
4. ಈ ಪ್ರಸ್ತಾವನೆಯನ್ನು ಮುಂದಿನ ಹಂಚಿಕೆ ಸಮಿತಿಯ ಸಭೆಯಲ್ಲಿ ಮಂಡಿಸಿ ಘಟನೋತ್ತರವಾಗಿ ಸ್ಥಿರೀಕರಿಸಿಕೊಳ್ಳುವ/ಅನುಮೋದಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

---2)

ಈ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
☎ 22034674.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1. ಸರ್ಕಾರದ ಅರಪ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6. ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.
7. ಉಪ ಅರಣ್ಯ ಸಂರಕ್ಷಣಾಧಿಕಾರಿ ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.
8. ತಹಶೀಲ್ದಾರ್ ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
9. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
10. M/s Pristine Solar Park Pvt Ltd., No. 332, 43rd Main 1st Cross, Ideal Homes, 2nd Phase, Rajarajeshwarinagar, Bengaluru-560098.
11. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
13. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
14. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.